# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 207
ಸದಸ್ಯರ ಹೆಸರು : ಶ್ರೀಮತಿ ಹೇಮಲತಾ ನಾಯಕ್
ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು
ಉತ್ತರಿಸುವ ದಿನಾಂಕ : 14.02.2024

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಸರ್ಕಾರ ಜಾರಿಗೆ ತಂದಿರುವ "ಶಕ್ತಿ ಯೋಜನೆ" ಅಡಿಯಲ್ಲಿ ರಾಜ್ಯ ಸಾರಿಗೆ ಸಂಸ್ಥೆಗೆ ಸೇರಿದ ಬಸ್ಸುಗಳು ಹೊರ ರಾಜ್ಯಗಳಿಗೆ ಹೋಗುತ್ತವೆ ಎನ್ನುವ ಕಾರಣಕ್ಕೆ ಉಚಿತ ಸೇವೆ ನೀಡದಿರುವುದರಿಂದ ಮಹಿಳೆಯರಿಗೆ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಈ ನಿಟ್ಟಿನಲ್ಲಿ ಕೈಗೊಂಡ ಕ್ರಮವೇನು; | ಶಕ್ತಿ ಯೋಜನೆಯಡಿ ಕರ್ನಾಟಕ ರಾಜ್ಯದ (Domicile of Karnataka) ಮಹಿಳೆಯರು ಸಾರಿಗೆ ಸಂಸ್ಥೆಗಳ ನಗರ, ಸಾಮಾನ್ಯ ಹಾಗೂ ವೇಗದೂತ ಸಾರಿಗೆಗಳಲ್ಲಿ ರಾಜ್ಯದ ಒಳಗೆ ಮಾತ್ರ ಉಚಿತವಾಗಿ ಪ್ರಯಾಣಿಸಬಹುದಾಗಿದ್ದು, ಅಂತರ ರಾಜ್ಯ/ ಪ್ರತಿಷ್ಠಿತ ಸಾರಿಗೆಗಳಲ್ಲಿ ಈ ಯೋಜನೆ ಅನ್ವಯಿಸುವುದಿಲ್ಲ.<br><br>ಆದಾಗ್ಯೂ, ಸಾರಿಗೆ ಸಂಸ್ಥೆಗಳ ವ್ಯಾಪ್ತಿಯ ಜಿಲ್ಲೆಗಳಿಗೆ ಹೊಂದಿಕೊಂಡಿರುವ ರಾಜ್ಯದ ಗಡಿ ಭಾಗದಲ್ಲಿರುವ ಮತ್ತು ಗಡಿ ಸಮೀಪವಿರುವ ಗ್ರಾಮಗಳಲ್ಲಿ ವಾಸಿಸುವ ಮಹಿಳೆಯರ ಅನುಕೂಲಕ್ಕಾಗಿ ಪರ್ಯಾಯ ವ್ಯವಸ್ಥೆ ಇಲ್ಲದ ಅಂತರ ರಾಜ್ಯ ಗಡಿ ಸಮೀಪದ ಗ್ರಾಮಗಳಿಗೆ ಕಾರ್ಯಾಚರಿಸುವ ಆಯ್ದ ಅಂತರ ರಾಜ್ಯ ಸಾರಿಗೆಗಳಲ್ಲಿ ಮಾತ್ರ ರಾಜ್ಯದ ಗಡಿಯವರೆಗೆ (ಕರ್ನಾಟಕ ರಾಜ್ಯದ ಒಳಗಡೆ ಮಾತ್ರ) ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿದೆ. |
| ಆ. | ರಾಜ್ಯ ಸಾರಿಗೆ ಸಂಸ್ಥೆಗೆ ಸೇರಿದ ಬಸ್ಸುಗಳು ಹೊರ ರಾಜ್ಯಗಳಿಗೆ ಹೋಗುತ್ತಿದ್ದರೂ, ರಾಜ್ಯದ ಗಡಿ ಭಾಗದವರೆಗೆ ಪ್ರಯಾಣಿಸುವ ರಾಜ್ಯದ ಮಹಿಳಾ ಪ್ರಯಾಣಿಕರಿಗೆ ಉಚಿತ ಸೇವೆ "ಶಕ್ತಿ ಯೋಜನೆ" ವ್ಯಾಪ್ತಿಗೆ ತರಲು ಸಾಧ್ಯವಿಲ್ಲವೆ; ರಾಜ್ಯದಲ್ಲಿ ಪ್ರಯಾಣಿಸುವ ಪ್ರತಿಯೊಬ್ಬ ಮಹಿಳೆಗೂ ಉಚಿತ ಪ್ರಯಾಣ ನೀಡುವಾಗ ತಾಂತ್ರಿಕ ಕಾರಣ ನೀಡಿ, ಹೊರರಾಜ್ಯಕ್ಕೆ ತೆರಳುವ ರಾಜ್ಯ ಸಾರಿಗೆ ಸಂಸ್ಥೆಗೆ ಸೇರಿದ್ದರೂ ಉಚಿತ ಸೇವೆಯಿಂದ ವಂಚಿತಗೊಳಿಸುವುದು ಸರಿಯಾದ ಕ್ರಮವೇ; | |
| ಇ. | ಸರ್ಕಾರ ಹೊರರಾಜ್ಯಗಳಿಗೆ ಹೋಗುವ ರಾಜ್ಯ ಸಾರಿಗೆ ಸಂಸ್ಥೆಗೆ ಸೇರಿದ ಬಸ್ಸುಗಳಿಗೂ ರಾಜ್ಯದ ಗಡಿ ಭಾಗದವರೆಗೆ ಪ್ರಯಾಣಿಸುವ ರಾಜ್ಯದ ಮಹಿಳಾ ಪ್ರಯಾಣಿಕರಿಗೆ "ಶಕ್ತಿ ಯೋಜನೆ" ವ್ಯಾಪ್ತಿಗೆ ತರಲು ಕ್ರಮ ಕೈಗೊಳ್ಳುವುದೇ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಜಾರಿಗೊಳಿಸಲಾಗುವುದು? | ಅಂತಹ ಪ್ರಸ್ತಾವನೆ ಇರುವುದಿಲ್ಲ. |

ಸಂಖ್ಯೆ: ಟಿಡಿ 10 ಟಿಸಿಕ್ಯೂ 2024

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು